ವೆಬ್‌ಸೈಟ್: www.kuvempu.ac.in
ದೂರವಾಣಿ:08282- 256166,7022254997 ಇ-ಮೇಲ್: regexamku@gmail.com

# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವರು(ಮೌಲ್ಯಮಾಪನ)ರವರ ಕಛೇರಿ, ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577 451.
ಶಿವಮೊಗ್ಗ ಜಿಲ್ಲೆ. ಕರ್ನಾಟಕ.

Re-Accredited by NAAC with 'A' Grade, Ranked 73rd place in NIRF-2019 & 45th place at National Level in SCIMAGO Rankings

ಸಂಖ್ಯೆ:ಕುವಿ:ಪವಿ:ಯುಜಿ-2/2019-20/ 6596 ದಿನಾಂಕ:04.10.2019.

## -:ಸುತ್ತೋಲೆ:-

ವಿಷಯ:-ಪ್ರವಾಹ ಪೀಡಿತ ಪ್ರವೇಶಗಳ ವಿದ್ಯಾರ್ಥಿಗಳ ವಿವರ ಒದಗಿಸುವ ಕುರಿತು.
ಉಲ್ಲೇಖ:-ಸರ್ಕಾರ ಅಪರ ಮುಖ್ಯಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ.
ಬೆಂಗಳೂರು ಇವರ ಪತ್ರ ಸಂಖ್ಯೆ:ಇಡಿ 146 ಯುಎನ್‌ಇ 2019.
ದಿನಾಂಕ:14.08.2019.

* * * * * *

ಆಗಸ್ಟ್/ಸೆಪ್ಟಂಬರ್-2019ರ ಮಾಹೆಯಲ್ಲಿ ರಾಜ್ಯದಲ್ಲಿ ಸುರಿದ ಭಾರಿ ಮಳೆಯಿಂದ ಪ್ರವಾಹ ಮತ್ತು ಭೂಕುಸಿತ ಉಂಟಾಗಿರುತ್ತದೆ. ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಳೆಯಿಂದ ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಉನ್ನತ ಶಿಕ್ಷಣ ಇಲಾಖೆ ಆಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ಕುಲಸಚಿವ(ಮೌಲ್ಯಮಾಪನ) ಇವರನ್ನು ಇದರ ನೋಡಲ್ ಅಧಿಕಾರಿಯಾಗಿ ನೇಮಿಸಲಾಗಿದೆ. ವಿಶ್ವವಿದ್ಯಾಲಯ ವ್ಯಾಪ್ತಿಯ ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲಾ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಳೆಯಿಂದ ಉಂಟಾದ ಸಮಸ್ಯೆಗಳನ್ನು ವಿವರವಾಗಿ ಆಗತ್ಯ ದಾಖಲೆಯೊಂದಿಗೆ ನೋಡಲ್ ಅಧಿಕಾರಿ/ ಕುಲಸಚಿವ (ಮೌಲ್ಯಮಾಪನ) ಇವರಿಗೆ ತುರ್ತಾಗಿ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಸರ್ಕಾರದ ಪತ್ರವನ್ನು ಈ ಸುತ್ತೋಲೆಗೆ ಲಗತ್ತಿಸಿದೆ.

04.10.19
(ಪ್ರೊ.ಎಂ.ವೆಂಕಟೇಶ್ವರಲು)
ಕುಲಸಚಿವರು(ಮೌಲ್ಯಮಾಪನ)
ಕುಲಸಚಿವ (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577451, ಶಿವಮೊಗ್ಗ ಜಿಲ್ಲೆ

ಗೆ,
ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲಾ ಸ್ನಾತಕ ಪದವಿ ಕಾಲೇಜು ಹಾಗೂ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರುಗಳಿಗೆ.

**ಪ್ರತಿ:**

1. ಆಪ್ತಶಾಖೆ, ಮಾನ್ಯಕುಲಪತಿ, ಕುಲಸಚಿವ(ಆಡಳಿತ), ಕುಲಸಚಿವ (ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
4. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
5. ಅಧೀಕ್ಷಕರು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
6. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ - ಸದರಿ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
7. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8. ಎಲ್ಲಾ ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ 9. ಕಛೇರಿ ಪ್ರತಿ.

9/10/19

.....2

## ನಮೂನೆ

ಕಾಲೇಜಿನ ಹೆಸರು:

| ಕ್ರ. ಸಂ. | ವಿದ್ಯಾರ್ಥಿ ಹೆಸರು | ತಂದೆ ಹೆಸರು | ಪದವಿ/ ಸೆಮ್ | ವಿಳಾಸ | ಹಾನಿಯ ಸ್ವರೂಪ | ಲಗತ್ತಿಸಿದ ದಾಖಲೆ | ಷರಾ |
|---|---|---|---|---|---|---|---|
| | | | | | | | |
| | | | | | | | |

ಪ್ರಾಂಶುಪಾಲರ ಸಹಿ

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 146 ಯುಎನ್‌ಇ 2019

ಕುವೆಂಪು ವಿಶ್ವವಿದ್ಯಾಲಯ
ಜ್ಞಾನ ಸಹ್ಯಾದ್ರಿ
19 SEP 2019
ಶಂಕರಘಟ್ಟ-577 451.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 14.08.2019.

Registrar's
Personal Section
To No. 198
Date 17/9/19

## ಸುತ್ತೋಲೆ

******

2019ನೇ ಸಾಲಿನ ಆಗಸ್ಟ್ ತಿಂಗಳಿನಲ್ಲಿ ಸುರಿದ ಭಾರಿ ಮಳೆಯಿಂದಾಗಿ ಉಂಟಾದ ಪ್ರವಾಹ ಮತ್ತು ಭೂಕುಸಿತದಿಂದಾಗಿ ಕರ್ನಾಟಕದ ವಿವಿಧ ಪ್ರದೇಶಗಳಲ್ಲಿ ಅಪಾರ ಪ್ರಮಾಣದ ಹಾನಿ ಸಂಭವಿಸಿರುವುದರಿಂದ ಈ ಪ್ರದೇಶಗಳ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳು ಮತ್ತು ಇಲಾಖೆಗಳು ಈ ಕೆಳಕಂಡ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ.

1. ಪ್ರವಾಹ ಪೀಡಿತ ಪ್ರದೇಶಗಳಲ್ಲಿನ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣಕ್ಕಾಗಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಗೊಳ್ಳಲು ಬಯಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಿ ಹಾಜರಾತಿ, ಹಾಸ್ಟೆಲ್ ಸೌಲಭ್ಯ ಒದಗಿಸುವಂತೆ ಹಾಗೂ ವಿಶೇಷ ತರಗತಿಗಳನ್ನು ನಡೆಸುವ ಮೂಲಕ ಪಠ್ಯಕ್ರಮಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
2. ವಿದ್ಯಾರ್ಥಿಗಳ ನೀರುಪಾಲಾಗಿರಬಹುದಾದ ಶೈಕ್ಷಣಿಕ ಪ್ರಮಾಣ ಪತ್ರಗಳು, ಪುಸ್ತಕಗಳು, ಬ್ಯಾಗ್ ಇತ್ಯಾದಿ ಅಗತ್ಯ ವಸ್ತುಗಳನ್ನು ಅವರಿಗೆ ಉಚಿತವಾಗಿ ಒದಗಿಸಲು ಕ್ರಮಕೈಗೊಳ್ಳುವುದು.
3. ಪ್ರವಾಹ ಪೀಡಿತ ಭಾಗಗಳಲ್ಲಿರುವ ವಿದ್ಯಾರ್ಥಿಗಳ ಯೋಗಕ್ಷೇಮವನ್ನು ನೋಡಿಕೊಂಡು ಸಂತ್ರಸ್ತರಿಗೆ ಹೆಚ್ಚಿನ ಆತ್ಮಸ್ಥೈರ್ಯ ತುಂಬಲು ಸಹಕಾರ ನೀಡುವುದು.
4. ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿನ ಎನ್.ಎಸ್.ಎಸ್. ಮತ್ತು ಎನ್.ಸಿ.ಸಿ. ಘಟಕಗಳ ಕ್ಯಾಂಪುಗಳನ್ನು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಆಯೋಜಿಸಿ, ಪ್ರವಾಹ ಪೀಡಿತ ಮತ್ತು ಹಾನಿಯಾಗಿರುವ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕೈಗೊಳ್ಳಲು ಹಾಗೂ ಸಂತ್ರಸ್ತರಲ್ಲಿ ಆತ್ಮಸ್ಥೈರ್ಯ ತುಂಬಲು ಹಾಗೂ ಜಿಲ್ಲಾಡಳಿತಗಳು ಕೈಗೊಳ್ಳುವ ಪುನರ್ವಸತಿ ಕಾರ್ಯಕ್ರಮಗಳಲ್ಲಿ ಜಿಲ್ಲಾಡಳಿತಕ್ಕೆ ಅಗತ್ಯ ಸಹಕಾರ ನೀಡುವುದು.
5. ಪ್ರವಾಹ ಪೀಡಿತ ಪ್ರದೇಶಗಳ ವಿದ್ಯಾರ್ಥಿಗಳಿಗೆ ಅಗತ್ಯ ಸಾರಿಗೆ ವ್ಯವಸ್ಥೆ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಕ್ರಮಕೈಗೊಳ್ಳುವುದು.
6. ವಿದ್ಯಾರ್ಥಿಗಳಿಗೆ ಉಂಟಾಗಿರಬಹುದಾದ ಆಘಾತದಿಂದ ಹೊರಬರುವಂತಾಗಲು ನಿಮ್ಹಾನ್ಸ್ ವತಿಯಿಂದ ನಡೆಸುತ್ತಿರುವ ಯುವ ಸ್ಪಂದನದ ಮೂಲಕ ವಿದ್ಯಾರ್ಥಿಗಳಿಗೆ ಕೌನ್ಸಿಲಿಂಗ್ ನೀಡುವ ವ್ಯವಸ್ಥೆಗಳನ್ನು ಕಲ್ಪಿಸಿ, ಅಲ್ಲಿನ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸಲು ಕ್ರಮಕೈಗೊಳ್ಳುವುದು.
7. ವಿದ್ಯಾರ್ಥಿಗಳಿಗೆ ಅಗತ್ಯ ಸಹಕಾರ ನೀಡುವಲ್ಲಿ ಹಾಗೂ ಮನೋಸ್ಥೈರ್ಯವನ್ನು ತುಂಬುವಲ್ಲಿ ಸ್ಥಳೀಯವಾಗಿ ಅಗತ್ಯವೆನಿಸಿದ ಕ್ರಮಗಳನ್ನು ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳು ಹಾಗೂ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಎನ್.ಸಿ.ಸಿ. ನಿರ್ದೇಶನಾಲಯದಿಂದ ಕೈಗೊಳ್ಳುವುದು.
8. ಈ ಎಲ್ಲಾ ಮಾಹಿತಿಗಳು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರುಗಳ ಗಮನಕ್ಕೆ ತರಲು ಅನುಕೂಲವಾಗುವಂತೆ ಜಿಲ್ಲಾಧಿಕಾರಿಗಳ ಕಚೇರಿ/ವಿಶ್ವವಿದ್ಯಾಲಯಗಳ ಮತ್ತು ಸಂಯೋಜಿತ ಕಾಲೇಜುಗಳ ಸೂಚನಾ ಫಲಕಗಳಲ್ಲಿ ಪೋಸ್ಟರ್‌ಗಳನ್ನು ಅಳವಡಿಸಲು ಕ್ರಮವಹಿಸುವಂತೆ ಹಾಗೂ ಇಲಾಖೆಯ ವತಿಯಿಂದ ಕೈಗೊಳ್ಳಲಾಗುತ್ತಿರುವ ಸಹಾಯಕ ಕ್ರಮಗಳ ಬಗ್ಗೆ ಪತ್ರಿಕಾ ಪ್ರಕಟಣೆ / ದೃಶ್ಯ ಮಾಧ್ಯಮ / ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಕ್ರಮವಹಿಸುವುದು.

Vice-Chancellor's
Personal Section
To No. 428
Date 16/9/2019

Registrar
Exam/AC/NSS
DR(UG)

9. ಕಾಲೇಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕಾರಿಗಳ ಸಹಕಾರದೊಂದಿಗೆ ಮೇಲಿನ ಎಲ್ಲಾ ಕ್ರಮಗಳನ್ನು ಕೈಗೊಳ್ಳಲು ಉನ್ನತ ಶಿಕ್ಷಣ ಇಲಾಖೆಯ ಅಧೀನದ ವಿಶ್ವವಿದ್ಯಾಲಯಗಳ ಕುಲಸಚಿವರು(ಮೌಲ್ಯಮಾಪನ) ಇವರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

10. ಮೇಲಿನ ಎಲ್ಲಾ ಅಂಶಗಳಂತೆ ಸಮರೋಪಾದಿಯಲ್ಲಿ ಕ್ರಮಕೈಗೊಂಡು ಕೈಗೊಂಡ ಕ್ರಮದ ಬಗ್ಗೆ ನೋಡಲ್ ಅಧಿಕಾರಿಗಳು ಸರ್ಕಾರಕ್ಕೆ ವರದಿಯನ್ನು ಸಲ್ಲಿಸತಕ್ಕದ್ದು.

(ಮಹೇಂದ್ರ ಜೈನ್)
ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ.
ಉನ್ನತ ಶಿಕ್ಷಣ ಇಲಾಖೆ.

ಇವರಿಗೆ,

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಶೇಷಾದ್ರಿ ರಸ್ತೆ, ಬೆಂಗಳೂರು.
3. ನಿರ್ದೇಶಕರು/ ಆಡಳಿತಾಧಿಕಾರಿಗಳು ಎನ್.ಸಿ.ಸಿ. ನಿರ್ದೇಶನಾಲಯ, ದೇವರಾಜು ಅರಸು ರಸ್ತೆ, ಬೆಂಗಳೂರು
4. ಎಲ್ಲಾ ಜಿಲ್ಲಾಧಿಕಾರಿಗಳು
5. ಕುಲಪತಿಗಳು/ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು-560056.
6. ಕುಲಪತಿಗಳು/ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-570005.
7. ಕುಲಪತಿಗಳು/ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾನಿಲಯ, ಧಾರವಾಡ-580033.
8. ಕುಲಪತಿಗಳು/ಕುಲಸಚಿವರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ-577451.
9. ಕುಲಪತಿಗಳು/ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾನಿಲಯ, ಕಲಬುರಗಿ-585106.
10. ಕುಲಪತಿಗಳು/ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳೂರು-574199.
11. ಕುಲಪತಿಗಳು/ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-572101.
12. ಕುಲಪತಿಗಳು/ಕುಲಸಚಿವರು, ಕನ್ನಡ ವಿಶ್ವವಿದ್ಯಾನಿಲಯ. ಹಂಪಿ – 583276.
13. ಕುಲಪತಿಗಳು/ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ.
14. ಕುಲಪತಿಗಳು/ಕುಲಸಚಿವರು, ರಾಣಿ ಚೆನ್ನಮ್ಮ ವಿಶ್ವವಿದ್ಯಾನಿಲಯ, ಬೆಳಗಾವಿ.
15. ಕುಲಪತಿಗಳು/ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾನಿಲಯ, ಬಳ್ಳಾರಿ.
16. ಕುಲಪತಿಗಳು/ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ, ಬೆಳಗಾವಿ.
17. ಕುಲಪತಿಗಳು/ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು-570006.
18. ಕುಲಪತಿಗಳು/ಕುಲಸಚಿವರು, ಕರ್ನಾಟಕ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ-586101.
19. ಕುಲಪತಿಗಳು/ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾನಿಲಯ, ಚಾಮರಾಜಪೇಟೆ, ಬೆಂಗಳೂರು.
20. ಕುಲಪತಿಗಳು/ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
21. ಕುಲಪತಿಗಳು/ಕುಲಸಚಿವರು, ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯ, ಮೈಸೂರು.
22. ಕುಲಪತಿಗಳು/ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಶ್ರೀ ದೇವರಾಜ ಅರಸು ಬಡಾವಣೆ ಕೋಲಾರ-563103
23. ಕುಲಪತಿಗಳು/ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ಸೆಂಟ್ರಲ್ ಕಾಲೇಜು ಆವರಣ ಬೆಂಗಳೂರು-560001.

ಪ್ರತಿ:

1. ಸನ್ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ.